ಕರ್ನಾಟಕ ಸರ್ಕಾರ

ಸಂಖ್ಯೆ:ಮರನಿ/ಬಾ.ವಿ.ನಿ.ಕೋ/ಇತರೆ/10/2025-26

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಡಾ. ಅಂಬೇಡ್ಕರ್ ವೀದಿ, ಬೆಂಗಳೂರು
ದಿನಾಂಕ: 13.10.2025.

## ಜಂಟಿ ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಶಾಲಾ ಕಾಲೇಜು, ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು, ಬಾಲಗರ್ಭಿಣಿ, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ 1098 ಕುರಿತು ಮಕ್ಕಳಿಗೆ ಅರಿವು/ಜಾಗೃತಿ ಮೂಡಿಸುವ ಕುರಿತು.

*****

ದಿನಾಂಕ:30.06.2025 ಮತ್ತು 31.06.2025ರಂದು ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾಧಿಕಾರಿಗಳು ಮತ್ತು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ರಾಜ್ಯದಲ್ಲಿ ದಾಖಲಾಗುತ್ತಿರುವ ಬಾಲ್ಯವಿವಾಹ ಪ್ರಕರಣಗಳು, ಬಾಲತಾಯಂದಿರ ಪ್ರಕರಣಗಳು ತಡೆಗಟ್ಟಲು ಅಗತ್ಯ ಕ್ರಮಕೈಗೊಳ್ಳಲು ಮತ್ತು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ನಿರ್ದೇಶನವನ್ನು ನೀಡಿರುತ್ತಾರೆ.

ದಿನಾಂಕ:03.06.2025ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ಬಾಲ್ಯವಿವಾಹಗಳನ್ನು ತಡೆಯುವ ರಾಜ್ಯಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಯಲ್ಲಿ ಬಾಲ್ಯವಿವಾಹ ಪ್ರಕರಣಗಳು ನಡೆಯದಂತೆ ಕ್ರಮಕೈಗೊಳ್ಳಲು ಎಲ್ಲಾ ಇಲಾಖೆಗಳಿಗೂ ಸೂಚನೆಯನ್ನು ನೀಡಿರುತ್ತಾರೆ.

ದಿನಾಂಕ:01.09.2025ರಂದು ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ರಾಜ್ಯದಲ್ಲಿ 14 ರಿಂದ 18 ವಯಸ್ಸಿನ ಗರ್ಭಧಾರಣೆಯ ಪ್ರಕರಣಗಳು ದಾಖಲಾಗಿರುವ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ನಡೆದ ಸಭೆಯಲ್ಲಿ 'ಬಾಲಗರ್ಭಿಣಿಯರ ಪ್ರಕರಣಗಳು ಹೆಚ್ಚಾಗುವುದಕ್ಕೆ ಕೌಟುಂಬಿಕ ಸಮಸ್ಯೆ, ಸಾಮಾಜಿಕ ಜಾಲತಾಣದ ಅತಿಯಾದ ಬಳಕೆ, ಬಾಲ್ಯವಿವಾಹ ಹೆಚ್ಚಳ, ಸಾಮಾಜಿಕ ಪದ್ಧತಿಗಳು, ಬಾಲಕಿಯರಲ್ಲಿ ಶಿಕ್ಷಣದ ಕೊರತೆ ಪ್ರಮುಖ ಕಾರಣಗಳಾಗಿದ್ದು, ಬಾಲಕಿಯರಿಗೆ ಬಾಲ ಗರ್ಭಾವಸ್ಥೆಯಿಂದ ಉಂಟಾಗುವ ಮಾನಸಿಕ, ದೈಹಿಕ ಮತ್ತು ಸಾಮಾಜಿಕ ದುಷ್ಪರಿಣಾಮಗಳ ಕುರಿತು ಕಡ್ಡಾಯವಾಗಿ ಅರಿವು/ಜಾಗೃತಿ ಮೂಡಿಸುವುದು ಹಾಗೂ ಶಾಲೆಗಳಲ್ಲಿ/ವಸತಿ ಶಾಲೆಗಳಲ್ಲಿ ಬಾಲಕಿಯರು ಯಾವುದೇ ಮಾಹಿತಿ ನೀಡದೇ 3 ದಿನಗಳಿಗಿಂತ ಹೆಚ್ಚು ಗೈರು ಹಾಜರಾದಲ್ಲಿ ಅಂತಹ ಬಾಲಕಿಯರ ಮಾಹಿತಿಯನ್ನು ಮುಖ್ಯ ಶಿಕ್ಷಕರು 1098 ಸಹಾಯವಾಣಿಗೆ ನೀಡತಕ್ಕದ್ದು. ಹಾಗೂ ಅರಿವು ಮೂಡಿಸಲು ಕ್ರಮಕೈಗೊಳ್ಳಲು ಸೂಚನೆ ನೀಡಿರುತ್ತಾರೆ.

ದಿನಾಂಕ:19.09.2025ರಂದು ನಡೆದ ಕರ್ನಾಟಕ ವಿಧಾನ ಮಂಡಲದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಸಭೆಯಲ್ಲಿ ಯಾದಗಿರಿ ಜಿಲ್ಲೆಯಲ್ಲಿ ಇತ್ತೀಚೆಗೆ ವಸತಿ ಶಾಲೆಯಲ್ಲಿ ವಿದ್ಯಾರ್ಥಿನಿಯ ಹೆರಿಗೆ ಕುರಿತು ಗಂಭೀರವಾಗಿ ಚರ್ಚಿಸಲಾಗಿದೆ. ತದನಂತರ ಸಮಿತಿಯು ಎಲ್ಲಾ ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿನ ಎಲ್ಲಾ ಶಾಲೆ ಮತ್ತು ವಸತಿ ಶಾಲೆಗಳಲ್ಲಿ ಮಕ್ಕಳ ಹಕ್ಕುಗಳು, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ ಕುರಿತು ಮಕ್ಕಳಿಗೆ ಅರಿವು/ಜಾಗೃತಿ ಮೂಡಿಸಲು ಸೂಚನೆಯನ್ನು ನೀಡಲಾಗಿದೆ.

ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸಲು ಹಾಗೂ ಬಾಲ್ಯವಿವಾಹ ನಿಷೇಧ ಕಾಯ್ದೆ 2006ರ ಅನುಷ್ಠಾನದ ಕುರಿತಂತೆ ಮತ್ತು ಕರ್ನಾಟಕ ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಪ್ರಾಧಿಕಾರದ ವತಿಯಿಂದ ಕೈಗೊಂಡ ಅಧ್ಯಯನದಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಶಾಲಾ ಹಂತದಲ್ಲಿ ಕಡ್ಡಾಯ ಲೈಂಗಿಕ ಶಿಕ್ಷಣ ಮತ್ತು ಕಾನೂನು ಅರಿವಿನ ಪರಿಚಯ ಪಠ್ಯಕ್ರಮ ಅಳವಡಿಸಲು ಶಿಫಾರಸ್ಸು ಮಾಡಿರುತ್ತಾರೆ.

31ಜಿಲ್ಲೆಗಳಲ್ಲಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಿಂದ ಮಕ್ಕಳ ರಕ್ಷಣಾಧಿಕಾರಿಗಳು ಬಾಲ್ಯವಿವಾಹ, ಪೋಕ್ಸೋ, ಬಾಲನ್ಯಾಯ ಕಾಯ್ದೆ, ಮಕ್ಕಳ ಪಾಲನೆ ಮತ್ತು ರಕ್ಷಣೆ ಕಾಯ್ದೆಗಳ ಕುರಿತು ಜನ ಸಾಮಾನ್ಯರಿಗೆ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಿರುತ್ತಾರೆ ಹಾಗೂ ವಿವಿಧ ಇಲಾಖೆಗಳಿಂದ ಅರಿವು ಮತ್ತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದರೂ ಸಹ ಇತ್ತೀಚಿನ ದಿನಗಳಲ್ಲಿ ಬಾಲ್ಯವಿವಾಹ ಪ್ರಕರಣಗಳು, ಬಾಲತಾಯಂದಿರ ಪ್ರಕರಣಗಳು ಮತ್ತು ಪೋಕ್ಸೋ ಪ್ರಕರಣಗಳು ಹೆಚ್ಚಾಗಿ ಸುದ್ದಿವಾಹಿನಿ ಮತ್ತು ಪತ್ರಿಕೆಗಳಲ್ಲಿ ವರದಿಯಾಗುತ್ತಿರುವುದನ್ನು ಗಮನಿಸಲಾಗಿದೆ.

ಅದರಂತೆ, ಹಾಗೂ ಮೇಲಿನ ಕಂಡಿಕೆಯಲ್ಲಿ ವಿವರಿಸಿರುವ ಟಿಪ್ಪಣಿಗಳ ಹಿನ್ನೆಲೆಯಲ್ಲಿ ಎಲ್ಲಾ ಶಾಲಾ ಕಾಲೇಜು ವಸತಿ ಮತ್ತು ವಸತಿ ರಹಿತ ಹಾಸ್ಟಲ್ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ ಕುರಿತು ಮಕ್ಕಳಿಗೆ ಅರಿವು/ಜಾಗೃತಿ ಮೂಡಿಸಲು ಎಲ್ಲಾ ತರಗತಿ ಹಾಗೂ ವಸತಿ ನಿಲಯಗಳ ಕೊಠಡಿಗಳಲ್ಲಿ ಪೋಸ್ಟರ್‌ಗಳನ್ನು ತೂಗುಹಾಕುವುದು ಅಥವಾ ಗೋಡೆ ಬರಹದ ಮೂಲಕ ಪ್ರಚುರಪಡಿಸುವುದು ಅತೀ ಅವಶ್ಯಕವಾಗಿರುತ್ತದೆ. ಇದರಿಂದ ಮಕ್ಕಳಲ್ಲಿ ಮಕ್ಕಳ ಹಕ್ಕು ಮತ್ತು ಕಾಯ್ದೆಗಳ ಕುರಿತು ಅರಿವು ಮತ್ತು ಜಾಗೃತಿ ಮೂಡಿ ಈ ಅನಿಷ್ಟ ಪದ್ಧತಿಗಳಿಂದ ಹೊರಬರಲು ಮಕ್ಕಳಿಗೆ ಅನುಕೂಲವಾಗುತ್ತದೆ ಹಾಗೂ ಮೂಲ ಹಂತದಲ್ಲಿ ಪ್ರಕರಣಗಳ ಸಂಖ್ಯೆಯನ್ನು ಕಡಿಮೆ ಮಾಡಲು ಸಹ ಸಹಕಾರಿಯಾಗಲಿದೆ.

ಆದ್ದರಿಂದ, (1) ಎಲ್ಲಾ ಶಾಲಾ ಕಾಲೇಜು ವಸತಿ ಮತ್ತು ವಸತಿ ರಹಿತ ಹಾಸ್ಟಲ್ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ ಕುರಿತು ಮಕ್ಕಳಿಗೆ ಅರಿವು/ಜಾಗೃತಿ ಮೂಡಿಸಲು ಎಲ್ಲಾ ತರಗತಿ ಹಾಗೂ ವಸತಿ ನಿಲಯಗಳ ಕೊಠಡಿಗಳಲ್ಲಿ ಕಡ್ಡಾಯವಾಗಿ ಪೋಸ್ಟರ್‌ಗಳನ್ನು ತೂಗುಹಾಕುವುದು ಅಥವಾ ಗೋಡೆ ಬರಹದ ಮೂಲಕ ಪ್ರದರ್ಶಿಸುವುದು. (2) ಎಲ್ಲಾ ವಸತಿ ಶಾಲೆಗಳಲ್ಲಿ ಪ್ರತ್ಯೇಕವಾಗಿ ಬಾಲಕ ಮತ್ತು ಬಾಲಕಿಯರ ವಸತಿ ನಿಲಯಗಳಿಗೆ ಕಂಪೌಂಡ್ ವ್ಯವಸ್ಥೆ ಮತ್ತು ಇತರೆ ಎಲ್ಲಾ ಸೌಲಭ್ಯಗಳನ್ನು ಹಾಗೂ ಭದ್ರತಾ ಸಿಬ್ಬಂದಿಯ ವ್ಯವಸ್ಥೆಯನ್ನು ಕಲ್ಪಿಸುವುದು. (3) ಎಲ್ಲಾ ಪ್ರೌಢ ಶಾಲೆಯ ಮಕ್ಕಳಿಗೆ ಕಡ್ಡಾಯವಾಗಿ ಸ್ತ್ರೀ ಆರೋಗ್ಯ ತಜ್ಞರಿಂದ (Gynaecologist) ತಪಾಸಣೆಯನ್ನೊಳಗೊಂಡಂತೆ ಆರೋಗ್ಯ ತಪಾಸಣೆಯನ್ನು ಕೈಗೊಳ್ಳುವುದು. (4) ರಾಜ್ಯ ಮಕ್ಕಳ ರಕ್ಷಣಾ ನೀತಿ 2016ರ ಪರಿಷ್ಕೃತ 2023 ಅನ್ನು ಎಲ್ಲಾ ಇಲಾಖೆಗಳು ಕಡ್ಡಾಯವಾಗಿ ಅನುಷ್ಠಾನಗೊಳಿಸುವುದು.

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆ ಅಂಶಗಳು:

**A) <u>ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ</u>**

1) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.
2) ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸುವುದು.
3) ಪ್ರತಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಪೋಷಕರು, ಮಕ್ಕಳು ಮತ್ತು ಶಿಕ್ಷಕರನ್ನು ಒಳಗೊಂಡಿರುವ ಒಂದು 'ಮಕ್ಕಳ ರಕ್ಷಣಾ ಸಮಿತಿ' ಯನ್ನು ರಚಿಸುವುದು ಹಾಗೂ 3 ತಿಂಗಳಿಗೊಮ್ಮೆ ನಿಯಮಾನುಸಾರ ಸಭೆ ನಡೆಸಿ ನಡಾವಳಿಯನ್ನು ದಾಖಲಿಸುವುದು.

4) ಶಾಲೆ/ವಸತಿ ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆಗಳನ್ನು ಅಳವಡಿಸಿ ಹೆಣ್ಣು ಮಕ್ಕಳ ಕುಂದು ಕೊರತೆಗಳನ್ನು ಪರಿಹರಿಸಲು ಕ್ರಮವಹಿಸುವುದು.
5) ಶಾಲೆಗಳಲ್ಲಿ ಹದಿಹರೆಯದ ಮಕ್ಕಳ ಮಾನಸಿಕ ಆರೋಗ್ಯ ಮತ್ತು ಇತರ ಸಮಸ್ಯೆಗಳನ್ನು ನಿಭಾಯಿಸುವಲ್ಲಿ ಪರಿಣತಿಯನ್ನು ಹೊಂದಿರುವ ಸುಶಿಕ್ಷಿತ, ತರಬೇತಿ ಪಡೆದ ಮತ್ತು ಅನುಭವಿ ಸಲಹೆಗಾರರನ್ನು ಶಾಲೆಗಳಲ್ಲಿ ಮತ್ತು ಪಿ.ಯು. ಕಾಲೇಜುಗಳಲ್ಲಿ ನೇಮಿಸುವುದನ್ನು ಖಾತ್ರಿಪಡಿಸಿಕೊಳ್ಳುವುದು.
6) ಔಪಚಾರಿಕ ಹಾಗೂ ಅನೌಪಚಾರಿಕ ಶೈಕ್ಷಣಿಕ ಪಠ್ಯಕ್ರಮದಲ್ಲಿ ಮಕ್ಕಳ ವಿರುದ್ಧದ ಅಪರಾಧಗಳು, ಬಾಲ ಕಾರ್ಮಿಕ ಪದ್ಧತಿ, ಮಕ್ಕಳ ಕಳ್ಳಸಾಗಾಣಿಕೆ, ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಇತ್ಯಾದಿಗಳ ಬಗ್ಗೆ ಶೈಕ್ಷಣಿಕ ಹಾಗೂ ಇತರ ಸ್ಥಳಗಳಲ್ಲಿ ಮಕ್ಕಳ ಮೇಲಿನ ಯಾವುದೇ ರೀತಿಯ ದೌರ್ಜನ್ಯ, ಹಿಂಸೆ, ತಾರತಮ್ಯ ಅಥವಾ ಶೋಷಣೆಯಂತಹ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು, ಗುರುತಿಸಲು ಮತ್ತು ವರದಿ ಮಾಡಲು ಮಕ್ಕಳಿಗೆ ಸೂಕ್ತ ಶಿಕ್ಷಣ ನೀಡುವುದು.
7) ಶಿಕ್ಷಣ ಇಲಾಖೆಯು ಮಕ್ಕಳಿಗೆ ವಯಸ್ಸಿಗೆ ಅನುಗುಣವಾಗಿ ಲೈಂಗಿಕ ಶಿಕ್ಷಣ ನೀಡುವುದನ್ನು ಖಚಿತಪಡಿಸಿಕೊಳ್ಳುವುದು.
8) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಾಲಾ ಪಠ್ಯಕ್ರಮದಲ್ಲಿ ಮಾದಕ ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.
9) ತಾತ್ಕಾಲಿಕ/ ಗುತ್ತಿಗೆ ಆಧಾರದ ಸಿಬ್ಬಂದಿ ಮತ್ತು ಸ್ವಯಂಸೇವಕರು ಕೂಡಾ ಸೇರಿದಂತೆ ಶಾಲೆಯಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಯ ಹಿನ್ನೆಲೆಯ ಕುರಿತು ಪೊಲೀಸ್ ಪರಿಶೀಲನೆಗಳನ್ನು ನಡೆಸುವ ಮೂಲಕ ಮಗುವಿನ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು.
10) ಶಾಲೆ/ವಸತಿ ಶಾಲೆಗಳಲ್ಲಿ ಬಾಲಕಿಯರು ಯಾವುದೇ ಮಾಹಿತಿ ನೀಡದೇ 3 ದಿನಗಳಿಗಿಂತ ಹೆಚ್ಚು ಗೈರು ಹಾಜರಾದಲ್ಲಿ ಅಂತಹ ಬಾಲಕಿಯರ ಮಾಹಿತಿಯನ್ನು ಮುಖ್ಯ ಶಿಕ್ಷಕರು ಬರವಣಿಗೆಯಲ್ಲಿ ಗ್ರಾಮ ಪಂಚಾಯತಿಗೆ ಮತ್ತು ಮಕ್ಕಳ ಸಹಾಯವಾಣಿ 1098ಗೆ ಮಾಹಿತಿ ನೀಡತಕ್ಕದ್ದು ಹಾಗೂ ಸ್ವತ: ಅನುಸರಣೆ ಮಾಡುವುದು.
11) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.
12) ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಪುನ: ಶಾಲೆಗೆ ಸೇರಿಸಿ 18 ವರ್ಷದವರೆಗೂ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನವೊಲಿಸಿ ಸೂಕ್ತ ಕ್ರಮಕೈಗೊಳ್ಳುವುದು.
13) ಶಾಲಾ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣೆ ಮಾಡುವುದು.
14) ಶಾಲೆ/ವಸತಿ ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸುವುದು ಮತ್ತು ದಾಖಲಾತಿಗಳನ್ನು ನಿರ್ವಹಿಸುವುದು.
15) ಶಾಲೆ/ವಸತಿ ಶಾಲೆಗಳಲ್ಲಿ ಅರಿವು/ಜಾಗೃತಿ ಮೂಡಿಸಲು ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಸಲಹೆ/ಸೇವೆಯನ್ನು ಪಡೆದುಕೊಳ್ಳುವುದು.
16) ಹೆಣ್ಣು ಮಕ್ಕಳು ಶಿಕ್ಷಣವನ್ನು ಪ್ರೋತ್ಸಾಹಿಸಲು ಶಾಲೆ/ವಸತಿ ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ನಿರ್ವಹಣೆ ಸೇರಿದಂತೆ ಸ್ಯಾನಿಟರಿ ಪ್ಯಾಡ್ ಒದಗಿಸುವ ಮತ್ತು ವಿಲೇವಾರಿ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸುವುದು.
17) ಎಲ್ಲಾ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಶಾಲೆ/ವಸತಿ ಶಾಲೆಗಳಿಗೆ ಭೇಟಿ ನೀಡಿ ಕುಂದುಕೊರತೆಗಳನ್ನು ಆಗಿಂದಾಗ್ಗೆ ಸಮಸ್ಯೆಗಳನ್ನು ಪರಿಹರಿಸುವುದು.
18) ಮಕ್ಕಳ ರಕ್ಷಣೆ, ಪೋಷಣೆ ಮತ್ತು ಪುನರ್ವಸತಿ ಕಲ್ಪಿಸುವುದು ಎಲ್ಲಾ ಇಲಾಖಾ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಬದ್ಧತೆಯಿಂದ ಮಕ್ಕಳ ಹಕ್ಕುಗಳ ರಕ್ಷಣಾ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳುವುದು.
19) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಕಡ್ಡಾಯವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವುದು.

20) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಶಾಲಾ ಗುರುತಿನ ಚೀಟಿಯಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ-1098/112 ಲೋಗೊವನ್ನು ಮುದ್ರಿಸುವುದು.
21) ಎಲ್ಲಾ ಶಾಲಾ ಕಾಲೇಜುಗಳಲ್ಲಿನ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಸಮಸ್ಯೆಗಳನ್ನು ಹೇಳಿಕೊಳ್ಳಲು ಮತ್ತು ಆಲಿಸಲು ಒಬ್ಬ ಮಕ್ಕಳ ಸ್ನೇಹಿ ಶಿಕ್ಷಕಿಯನ್ನು ಗುರುತಿಸಿ ವಾರದಲ್ಲಿ ಒಂದುದಿನ ಇದಕ್ಕಾಗಿ ಸಮಯ ನಿಗದಿಗೊಳಿಸುವುದು.
22) ಮಕ್ಕಳ ಶರೀರದಲ್ಲಿ ಮತ್ತು ಆರೋಗ್ಯದಲ್ಲಿ ಉಂಟಾಗುವ ಏರುಪೇರುಗಳು ಮತ್ತು ಮಾನಸಿಕ ಬದಲಾವಣೆಗಳ ಬಗ್ಗೆ ಬಾಲಕಿಗೆ ಆಪ್ತ ಸಮಾಲೋಚನೆ ಅಗತ್ಯವಿದ್ದಲ್ಲಿ ಉಚಿತ ಸಹಾಯವಾಣಿ-14416 ಬಳಸಿಕೊಳ್ಳಲು ಅರಿವು ಮೂಡಿಸುವುದು.
23) ಶಾಲೆಯಲ್ಲಿ ಪ್ರತಿ ತಿಂಗಳು ಮೌಲ್ಯಾಧಾರಿತ ಶಿಕ್ಷಣದ ತರಬೇತಿಗಳನ್ನು ನಡೆಸುವುದು.
24) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.
25) ಬಾಲ್ಯ ವಿವಾಹ ಮತ್ತು ಪೋಕ್ಸೋ ಕಾಯ್ದೆ ಕುರಿತು SDMC ಸಮಿತಿಯಲ್ಲಿ ಚರ್ಚಿಸುವುದು ಹಾಗೂ ಮಕ್ಕಳ ಪಾಲನೆ ಮತ್ತು ಪೋಷನೆಯಲ್ಲಿ ಪೋಷಕರ ಜವಾಬ್ದಾರಿ ಕುರಿತು ಪೋಷಕರ ಸಭೆಯಲ್ಲಿ ಜಾಗೃತಿ ಮೂಡಿಸುವುದು.

## B) <u>ಸಮಾಜ ಕಲ್ಯಾಣ ಇಲಾಖೆ</u>

1) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.
2) ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸುವುದು.
3) ಪ್ರತಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಪೋಷಕರು, ಮಕ್ಕಳು ಮತ್ತು ಶಿಕ್ಷಕರನ್ನು ಒಳಗೊಂಡಿರುವ ಒಂದು 'ಮಕ್ಕಳ ರಕ್ಷಣಾ ಸಮಿತಿ' ಯನ್ನು ರಚಿಸುವುದು ಹಾಗೂ 3 ತಿಂಗಳಿಗೊಮ್ಮೆ ನಿಯಮಾನುಸಾರ ಸಭೆ ನಡೆಸಿ ನಡಾವಳಿಯನ್ನು ದಾಖಲಿಸುವುದು.
4) ಶಾಲೆ/ವಸತಿ ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆಗಳನ್ನು ಅಳವಡಿಸಿ ಹೆಣ್ಣು ಮಕ್ಕಳ ಕುಂದು ಕೊರತೆಗಳನ್ನು ಪರಿಹರಿಸಲು ಕ್ರಮವಹಿಸುವುದು.
5) ಔಪಚಾರಿಕ ಹಾಗೂ ಅನೌಪಚಾರಿಕ ಶೈಕ್ಷಣಿಕ ಪಠ್ಯಕ್ರಮದಲ್ಲಿ ಮಕ್ಕಳ ವಿರುದ್ಧದ ಅಪರಾಧಗಳು, ಬಾಲ ಕಾರ್ಮಿಕ ಪದ್ಧತಿ, ಮಕ್ಕಳ ಕಳ್ಳಸಾಗಾಣಿಕೆ, ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಇತ್ಯಾದಿಗಳ ಬಗ್ಗೆ ಶೈಕ್ಷಣಿಕ ಹಾಗೂ ಇತರ ಸ್ಥಳಗಳಲ್ಲಿ ಮಕ್ಕಳ ಮೇಲಿನ ಯಾವುದೇ ರೀತಿಯ ದೌರ್ಜನ್ಯ, ಹಿಂಸೆ, ತಾರತಮ್ಯ ಅಥವಾ ಶೋಷಣೆಯಂತಹ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು, ಗುರುತಿಸಲು ಮತ್ತು ವರದಿ ಮಾಡಲು ಮಕ್ಕಳಿಗೆ ಸೂಕ್ತ ಶಿಕ್ಷಣ ನೀಡುವುದು.
6) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಾಲಾ ಪಠ್ಯಕ್ರಮದಲ್ಲಿ ಮಾದಕ ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.
7) ತಾತ್ಕಾಲಿಕ/ ಗುತ್ತಿಗೆ ಆಧಾರದ ಸಿಬ್ಬಂದಿ ಮತ್ತು ಸ್ವಯಂಸೇವಕರು ಕೂಡಾ ಸೇರಿದಂತೆ ಶಾಲೆಯಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಯ ಹಿನ್ನೆಲೆ ಪರಿಶೀಲ ಸಿಬ್ಬಂದಿಯ ಹಿನ್ನೆಲೆಯ ಕುರಿತು ಪೊಲೀಸ್ ಪರಿಶೀಲನೆಗಳನ್ನು ನಡೆಸುವ ಮೂಲಕ ಮಗುವಿನ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು.
8) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.
9) ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಪುನ: ಶಾಲೆಗೆ ಸೇರಿಸಿ 18 ವರ್ಷದವರೆಗೂ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನವೊಲಿಸಿ ಸೂಕ್ತ ಕ್ರಮಕೈಗೊಳ್ಳುವುದು.
10) ಶಾಲಾ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣೆ ಮಾಡುವುದು.

11) ಶಾಲೆ/ವಸತಿ ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸುವುದು ಮತ್ತು ದಾಖಲಾತಿಗಳನ್ನು ನಿರ್ವಹಿಸುವುದು.

12) ಹೆಣ್ಣುಮಕ್ಕಳ ವಸತಿ ಶಾಲೆಗಳಲ್ಲಿ ನಿಯಮಿತವಾಗಿ ಮತ್ತು ದೀರ್ಘವಾದಿ ರಜೆ ಮತ್ತು ಬೇಸಿಗೆ ರಜೆ ಮುಗಿಸಿ ನಿಲಯಕ್ಕೆ ಹಾಜರಾದ ಸಂದರ್ಭದಲ್ಲಿ ಸ್ತ್ರಿ ಆರೋಗ್ಯ ತಜ್ಞರಿಂದ (Gynaecologist) ಕಡ್ಡಾಯವಾಗಿ ಆರೋಗ್ಯ ತಪಾಸಣೆ ಕೈಗೊಂಡು ದಾಖಲೆಗಳನ್ನು ನಿರ್ವಹಿಸುವುದು.

13) ಶಾಲೆ/ವಸತಿ ಶಾಲೆಗಳಲ್ಲಿ ಅರಿವು/ಜಾಗೃತಿ ಮೂಡಿಸಲು ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಸಲಹೆ/ಸೇವೆಯನ್ನು ಪಡೆದುಕೊಳ್ಳುವುದು.

14) ಹೆಣ್ಣು ಮಕ್ಕಳು ಶಿಕ್ಷಣವನ್ನು ಪ್ರೋತ್ಸಾಹಿಸಲು ಶಾಲೆ/ವಸತಿ ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ನಿರ್ವಹಣೆ ಸೇರಿದಂತೆ ಸ್ಯಾನಿಟರಿ ಪ್ಯಾಡ್ ಒದಗಿಸುವ ಮತ್ತು ವಿಲೇವಾರಿ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸುವುದು.

15) ಎಲ್ಲಾ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಶಾಲೆ/ವಸತಿ ಶಾಲೆಗಳಿಗೆ ಭೇಟಿ ನೀಡಿ ಕುಂದುಕೊರತೆಗಳನ್ನು ಆಗಿಂದಾಗ್ಗೆ ಪರಿಹರಿಸುವುದು.

16) ಮಕ್ಕಳ ರಕ್ಷಣೆ, ಪೋಷಣೆ ಮತ್ತು ಪುನರ್ವಸತಿ ಕಲ್ಪಿಸುವುದು ಎಲ್ಲಾ ಇಲಾಖಾ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಬದ್ಧತೆಯಿಂದ ಮಕ್ಕಳ ಹಕ್ಕುಗಳ ರಕ್ಷಣಾ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳುವುದು.

17) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಕಡ್ಡಾಯವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವುದು.

18) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಶಾಲಾ ಗುರುತಿನ ಚೀಟಿಯಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ-1098/112 ಲೋಗೋವನ್ನು ಮುದ್ರಿಸುವುದು.

19) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ(KRIES) ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳ ಮೇಲುಸ್ತುವಾರಿ ಮಾಡಲು ಆಯಾ ಅಪರ ಜಿಲ್ಲಾಧಿಕಾರಿಗಳನ್ನು ನೇಮಿಸಲಾಗಿದೆ. ಅಪರ ಜಿಲ್ಲಾಧಿಕಾರಿಗಳು ಸಂಪೂರ್ಣ ಆಡಳಿತಾತ್ಮಕ ಜವಾಬ್ದಾರಿ ನಿರ್ವಹಿಸುವುದು ಮತ್ತು ನಿಯಮಿತವಾಗಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ನಡಸುವುದು.

20) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ(KRIES) ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳ ಪ್ರಾಂಶುಪಾಲರು ಹಾಗೂ ಅಧೀನ ಸಿಬ್ಬಂದಿಗಳ ವಾರ್ಷಿಕ ನಿರ್ವಹಣಾ ವರದಿಯನ್ನು(ACR) ಬರೆಯುವ ಅಧಿಕಾರವನ್ನು ಆಯಾ ಜಿಲ್ಲಾಧಿಕಾರಿಗಳಿಗೆ ನೀಡುವುದು.

21) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ(KRIES) ವ್ಯಾಪ್ತಿಯಲ್ಲಿ ಬರುವ ವಸತಿ ಶಾಲೆಗಳಲ್ಲಿ ಅರ್ಹ ಶುಶ್ರೂಕಿಯರನ್ನು ನೇಮಕ ಮಾಡಿಕೊಳ್ಳುವುದು.

22) ಮಕ್ಕಳ ಶರೀರದಲ್ಲಿ ಮತ್ತು ಆರೋಗ್ಯದಲ್ಲಿ ಉಂಟಾಗುವ ಏರುಪೇರುಗಳು ಮತ್ತು ಮಾನಸಿಕ ಬದಲಾವಣೆಗಳ ಬಗ್ಗೆ ಬಾಲಕಿಗೆ ಆಪ್ತ ಸಮಾಲೋಚನೆ ಅಗತ್ಯವಿದ್ದಲ್ಲಿ ಉಚಿತ ಸಹಾಯವಾಣಿ-14416 ಬಳಸಿಕೊಳ್ಳಲು ಅರಿವು ಮೂಡಿಸುವುದು.

23) ವಸತಿ ನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾದಲ್ಲಿ ಗುರುತಿಸಿ ಅಗತ್ಯ ಆಪ್ತ ಸಮಾಲೋಚನೆ ನೆರವು ಒದಗಿಸುವುದು.

24) ವಸತಿ ನಿಲಯಗಳ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಕಾರ್ಯಕ್ರಮಗಳನ್ನು ಆಯೋಜಿಸುವುದು.

25) ವಿದ್ಯಾರ್ಥಿ ನಿಲಯಗಳಲ್ಲಿ ಕಡ್ಡಾಯವಾಗಿ ಚಲನ-ವಲನ ವಹಿಯಲ್ಲಿ ವಿದ್ಯಾರ್ಥಿಗಳು ದಾಖಲಿಸಿರುವ ವಿವರವನ್ನು ಪರಿಶೀಲಿಸಿ ಮುಂಜಾಗೃತ ಕ್ರಮವನ್ನು ಕೈಗೊಳ್ಳುವುದು.

26) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

## C) ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ

1) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.
2) ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸುವುದು.
3) ಪ್ರತಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಪೋಷಕರು, ಮಕ್ಕಳು ಮತ್ತು ಶಿಕ್ಷಕರನ್ನು ಒಳಗೊಂಡಿರುವ ಒಂದು 'ಮಕ್ಕಳ ರಕ್ಷಣಾ ಸಮಿತಿ' ಯನ್ನು ರಚಿಸುವುದು ಹಾಗೂ 3 ತಿಂಗಳಿಗೊಮ್ಮೆ ನಿಯಮಾನುಸಾರ ಸಭೆ ನಡೆಸಿ ನಡಾವಳಿಯನ್ನು ದಾಖಲಿಸುವುದು.
4) ಶಾಲೆ/ವಸತಿ ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆಗಳನ್ನು ಅಳವಡಿಸಿ ಹೆಣ್ಣು ಮಕ್ಕಳ ಕುಂದು ಕೊರತೆಗಳನ್ನು ಪರಿಹರಿಸಲು ಕ್ರಮವಹಿಸುವುದು.
5) ಶಾಲೆಗಳಲ್ಲಿ ಹದಿಹರೆಯದ ಮಕ್ಕಳ ಮಾನಸಿಕ ಆರೋಗ್ಯ ಮತ್ತು ಇತರ ಸಮಸ್ಯೆಗಳನ್ನು ನಿಭಾಯಿಸುವಲ್ಲಿ ಪರಿಣತಿಯನ್ನು ಹೊಂದಿರುವ ಸುಶಿಕ್ಷಿತ, ತರಬೇತಿ ಪಡೆದ ಮತ್ತು ಅನುಭವಿ ಸಲಹೆಗಾರರನ್ನು ಶಾಲೆಗಳಲ್ಲಿ ಮತ್ತು ಪಿ.ಯು. ಕಾಲೇಜುಗಳಲ್ಲಿ ನೇಮಿಸುವುದನ್ನು ಖಾತ್ರಿಪಡಿಸಿಕೊಳ್ಳುವುದು.
6) ಔಪಚಾರಿಕ ಹಾಗೂ ಅನೌಪಚಾರಿಕ ಶೈಕ್ಷಣಿಕ ಪಠ್ಯಕ್ರಮದಲ್ಲಿ ಮಕ್ಕಳ ವಿರುದ್ಧದ ಅಪರಾಧಗಳು, ಬಾಲ ಕಾರ್ಮಿಕ ಪದ್ಧತಿ, ಮಕ್ಕಳ ಕಳ್ಳಸಾಗಾಣಿಕೆ, ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಇತ್ಯಾದಿಗಳ ಬಗ್ಗೆ ಶೈಕ್ಷಣಿಕ ಹಾಗೂ ಇತರೆ ಸ್ಥಳಗಳಲ್ಲಿ ಮಕ್ಕಳ ಮೇಲಿನ ಯಾವುದೇ ರೀತಿಯ ದೌರ್ಜನ್ಯ, ಹಿಂಸೆ, ತಾರತಮ್ಯ ಅಥವಾ ಶೋಷಣೆಯಂತಹ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು, ಗುರುತಿಸಲು ಮತ್ತು ವರದಿ ಮಾಡಲು ಮಕ್ಕಳಿಗೆ ಸೂಕ್ತ ಶಿಕ್ಷಣ ನೀಡುವುದು.
7) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಾಲಾ ಪಠ್ಯಕ್ರಮದಲ್ಲಿ ಮಾದಕ ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.
8) ತಾತ್ಕಾಲಿಕ/ ಗುತ್ತಿಗೆ ಆಧಾರದ ಸಿಬ್ಬಂದಿ ಮತ್ತು ಸ್ವಯಂಸೇವಕರು ಕೂಡಾ ಸೇರಿದಂತೆ ಶಾಲೆಯಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಯ ಹಿನ್ನೆಲೆಯ ಕುರಿತು ಪೊಲೀಸ್ ಪರಿಶೀಲನೆಗಳನ್ನು ನಡೆಸುವ ಮೂಲಕ ಮಗುವಿನ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು.
9) ಶಾಲೆ/ವಸತಿ ಶಾಲೆಗಳಲ್ಲಿ ಬಾಲಕಿಯರು ಯಾವುದೇ ಮಾಹಿತಿ ನೀಡದೇ 3 ದಿನಗಳಿಗಿಂತ ಹೆಚ್ಚು ಗೈರು ಹಾಜರಾದಲ್ಲಿ ಅಂತಹ ಬಾಲಕಿಯರ ಮಾಹಿತಿಯನ್ನು ಮುಖ್ಯ ಶಿಕ್ಷಕರು ಮಕ್ಕಳ ಸಹಾಯವಾಣಿ 1098ಗೆ ನೀಡತಕ್ಕದ್ದು ಹಾಗೂ ಸ್ವತ: ಅನುಸರಣೆ ಮಾಡುವುದು.
10) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.
11) ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಪುನ: ಶಾಲೆಗೆ ಸೇರಿಸಿ 18 ವರ್ಷದವರೆಗೂ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನವೊಲಿಸಿ ಸೂಕ್ತ ಕ್ರಮಕೈಗೊಳ್ಳುವುದು.
12) ಶಾಲಾ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣೆ ಮಾಡುವುದು.
13) ಶಾಲೆ/ವಸತಿ ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸುವುದು ಮತ್ತು ದಾಖಲಾತಿಗಳನ್ನು ನಿರ್ವಹಿಸುವುದು.
14) ಹೆಣ್ಣುಮಕ್ಕಳ ವಸತಿ ಶಾಲೆಗಳಲ್ಲಿ ನಿಯಮಿತವಾಗಿ ಮತ್ತು ದೀರ್ಘವಾದಿ ರಜೆ ಮತ್ತು ಬೇಸಿಗೆ ರಜೆ ಮುಗಿಸಿ ನಿಲಯಕ್ಕೆ ಹಾಜರಾದ ಸಂದರ್ಭದಲ್ಲಿ ಸ್ತ್ರೀ ಆರೋಗ್ಯ ತಜ್ಞರಿಂದ

(Gynaecologist) ಕಡ್ಡಾಯವಾಗಿ ಆರೋಗ್ಯ ತಪಾಸಣೆ ಕೈಗೊಂಡು ದಾಖಲೆಗಳನ್ನು ನಿರ್ವಹಿಸುವುದು.

15) ಶಾಲೆ/ವಸತಿ ಶಾಲೆಗಳಲ್ಲಿ ಅರಿವು/ಜಾಗೃತಿ ಮೂಡಿಸಲು ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಸಲಹೆ/ಸೇವೆಯನ್ನು ಪಡೆದುಕೊಳ್ಳುವುದು.

16) ಹೆಣ್ಣು ಮಕ್ಕಳು ಶಿಕ್ಷಣವನ್ನು ಪ್ರೋತ್ಸಾಹಿಸಲು ಶಾಲೆ/ವಸತಿ ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ನಿರ್ವಹಣೆ ಸೇರಿದಂತೆ ಸ್ಯಾನಿಟರಿ ಪ್ಯಾಡ್ ಒದಗಿಸುವ ಮತ್ತು ವಿಲೇವಾರಿ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸುವುದು.

17) ಎಲ್ಲಾ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಶಾಲೆ/ವಸತಿ ಶಾಲೆಗಳಿಗೆ ಭೇಟಿ ನೀಡಿ ಕುಂದುಕೊರತೆಗಳನ್ನು ಆಗಿಂದಾಗ್ಗೆ ಪರಿಹರಿಸುವುದು.

18) ಮಕ್ಕಳ ರಕ್ಷಣೆ, ಪೋಷಣೆ ಮತ್ತು ಪುನರ್ವಸತಿ ಕಲ್ಪಿಸುವುದು ಎಲ್ಲಾ ಇಲಾಖಾ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಬದ್ಧತೆಯಿಂದ ಮಕ್ಕಳ ಹಕ್ಕುಗಳ ರಕ್ಷಣಾ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳುವುದು.

19) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಕಡ್ಡಾಯವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವುದು.

20) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಶಾಲಾ ಗುರುತಿನ ಚೀಟಿಯಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ-1098/112 ಲೋಗೋವನ್ನು ಮುದ್ರಿಸುವುದು.

21) ಎಲ್ಲಾ ಶಾಲಾ ಕಾಲೇಜುಗಳಲ್ಲಿನ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಸಮಸ್ಯೆಗಳನ್ನು ಹೇಳಿಕೊಳ್ಳಲು ಮತ್ತು ಆಲಿಸಲು ಒಬ್ಬ ಮಕ್ಕಳ ಸ್ನೇಹಿ ಶಿಕ್ಷಕಿಯನ್ನು ಗುರುತಿಸಿ ವಾರದಲ್ಲಿ ಒಂದುದಿನ ಇದಕ್ಕಾಗಿ ಸಮಯ ನಿಗದಿಗೊಳಿಸುವುದು.

22) ಮಕ್ಕಳ ಶರೀರದಲ್ಲಿ ಮತ್ತು ಆರೋಗ್ಯದಲ್ಲಿ ಉಂಟಾಗುವ ಏರುಪೇರುಗಳು ಮತ್ತು ಮಾನಸಿಕ ಬದಲಾವಣೆಗಳ ಬಗ್ಗೆ ಬಾಲಕಿಗೆ ಆಪ್ತ ಸಮಾಲೋಚನೆ ಅಗತ್ಯವಿದ್ದಲ್ಲಿ ಉಚಿತ ಸಹಾಯವಾಣಿ-14416 ಬಳಸಿಕೊಳ್ಳಲು ಅರಿವು ಮೂಡಿಸುವುದು.

23) ವಸತಿ ನಿಲಯಗಳಲ್ಲಿ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.

24) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

## D) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

01) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.

02) ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸುವುದು.

03) ಪ್ರತಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಪೋಷಕರು, ಮಕ್ಕಳು ಮತ್ತು ಶಿಕ್ಷಕರನ್ನು ಒಳಗೊಂಡಿರುವ ಒಂದು 'ಮಕ್ಕಳ ರಕ್ಷಣಾ ಸಮಿತಿ' ಯನ್ನು ರಚಿಸುವುದು ಹಾಗೂ 3 ತಿಂಗಳಿಗೊಮ್ಮೆ ನಿಯಮಾನುಸಾರ ಸಭೆ ನಡೆಸಿ ನಡಾವಳಿಯನ್ನು ದಾಖಲಿಸುವುದು.

04) ಶಾಲೆ/ವಸತಿ ಶಾಲೆಗಳಲ್ಲಿ ದೂರು/ಸಲಹಾ ಪೆಟ್ಟಿಗೆಗಳನ್ನು ಅಳವಡಿಸಿ ಹೆಣ್ಣು ಮಕ್ಕಳ ಕುಂದು ಕೊರತೆಗಳನ್ನು ಪರಿಹರಿಸಲು ಕ್ರಮವಹಿಸುವುದು.

05) ಶಾಲೆಗಳಲ್ಲಿ ಹದಿಹರೆಯದ ಮಕ್ಕಳ ಮಾನಸಿಕ ಆರೋಗ್ಯ ಮತ್ತು ಇತರ ಸಮಸ್ಯೆಗಳನ್ನು ನಿಭಾಯಿಸುವಲ್ಲಿ ಪರಿಣತಿಯನ್ನು ಹೊಂದಿರುವ ಸುಶಿಕ್ಷಿತ, ತರಬೇತಿ ಪಡೆದ ಮತ್ತು ಅನುಭವಿ ಸಲಹೆಗಾರರನ್ನು ಶಾಲೆಗಳಲ್ಲಿ ಮತ್ತು ಪಿ.ಯು. ಕಾಲೇಜುಗಳಲ್ಲಿ ನೇಮಿಸುವುದನ್ನು ಖಾತ್ರಿಪಡಿಸಿಕೊಳ್ಳುವುದು.

06) ಔಪಚಾರಿಕ ಹಾಗೂ ಅನೌಪಚಾರಿಕ ಶೈಕ್ಷಣಿಕ ಪಠ್ಯಕ್ರಮದಲ್ಲಿ ಮಕ್ಕಳ ವಿರುದ್ಧದ ಅಪರಾಧಗಳು, ಬಾಲ ಕಾರ್ಮಿಕ ಪದ್ಧತಿ, ಮಕ್ಕಳ ಕಳ್ಳಸಾಗಾಣಿಕೆ, ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ, ಬಾಲ್ಯವಿವಾಹ ಇತ್ಯಾದಿಗಳ ಬಗ್ಗೆ ಶೈಕ್ಷಣಿಕ ಹಾಗೂ ಇತರ ಸ್ಥಳಗಳಲ್ಲಿ ಮಕ್ಕಳ ಮೇಲಿನ ಯಾವುದೇ ರೀತಿಯ ದೌರ್ಜನ್ಯ, ಹಿಂಸೆ, ತಾರತಮ್ಯ ಅಥವಾ ಶೋಷಣೆಯಂತಹ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಲು, ಗುರುತಿಸಲು ಮತ್ತು ವರದಿ ಮಾಡಲು ಮಕ್ಕಳಿಗೆ ಸೂಕ್ತ ಶಿಕ್ಷಣ ನೀಡುವುದು.

07) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಾಲಾ ಪಠ್ಯಕ್ರಮದಲ್ಲಿ ಮಾದಕ ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.

08) ತಾತ್ಕಾಲಿಕ/ ಗುತ್ತಿಗೆ ಆಧಾರದ ಸಿಬ್ಬಂದಿ ಮತ್ತು ಸ್ವಯಂಸೇವಕರು ಕೂಡಾ ಸೇರಿದಂತೆ ಶಾಲೆಯಲ್ಲಿ ಮಕ್ಕಳೊಂದಿಗೆ ಕೆಲಸ ಮಾಡುವ ಎಲ್ಲಾ ಸಿಬ್ಬಂದಿಯ ಹಿನ್ನೆಲೆಯ ಕುರಿತು ಪೊಲೀಸ್ ಪರಿಶೀಲನೆಗಳನ್ನು ನಡೆಸುವ ಮೂಲಕ ಮಗುವಿನ ಸುರಕ್ಷತೆ ಮತ್ತು ಭದ್ರತೆಯನ್ನು ಖಚಿತಪಡಿಸಿಕೊಳ್ಳುವುದು.

09) ಶಾಲೆ/ವಸತಿ ಶಾಲೆಗಳಲ್ಲಿ ಬಾಲಕಿಯರು ಯಾವುದೇ ಮಾಹಿತಿ ನೀಡದೇ 3 ದಿನಗಳಿಗಿಂತ ಹೆಚ್ಚು ಗೈರು ಹಾಜರಾದಲ್ಲಿ ಅಂತಹ ಬಾಲಕಿಯರ ಮಾಹಿತಿಯನ್ನು ಮುಖ್ಯ ಶಿಕ್ಷಕರು ಮಕ್ಕಳ ಸಹಾಯವಾಣಿ 1098ಗೆ ನೀಡತಕ್ಕದ್ದು ಹಾಗೂ ಸ್ವತ: ಅನುಸರಣೆ ಮಾಡುವುದು.

10) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.

11) ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಪುನ: ಶಾಲೆಗೆ ಸೇರಿಸಿ 18 ವರ್ಷದವರೆಗೂ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನವೊಲಿಸಿ ಸೂಕ್ತ ಕ್ರಮಕೈಗೊಳ್ಳುವುದು.

12) ಶಾಲಾ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣೆ ಮಾಡುವುದು.

13) ಶಾಲೆ/ವಸತಿ ಶಾಲೆಗಳಲ್ಲಿ ಎಲ್ಲಾ ಮಕ್ಕಳಿಗೂ ನಿಯಮಿತವಾಗಿ ಆರೋಗ್ಯ ತಪಾಸಣೆ ಮಾಡಿಸುವುದು ಮತ್ತು ದಾಖಲಾತಿಗಳನ್ನು ನಿರ್ವಹಿಸುವುದು.

14) ಹೆಣ್ಣುಮಕ್ಕಳ ವಸತಿ ಶಾಲೆಗಳಲ್ಲಿ ನಿಯಮಿತವಾಗಿ ಮತ್ತು ದೀರ್ಘವಾದಿ ರಜೆ ಮತ್ತು ಬೇಸಿಗೆ ರಜೆ ಮುಗಿಸಿ ನಿಲಯಕ್ಕೆ ಹಾಜರಾದ ಸಂದರ್ಭದಲ್ಲಿ ಸ್ತ್ರಿ ಆರೋಗ್ಯ ತಜ್ಞರಿಂದ (Gynaecologist) ಕಡ್ಡಾಯವಾಗಿ ಆರೋಗ್ಯ ತಪಾಸಣೆ ಕೈಗೊಂಡು ದಾಖಲೆಗಳನ್ನು ನಿರ್ವಹಿಸುವುದು.

15) ಶಾಲೆ/ವಸತಿ ಶಾಲೆಗಳಲ್ಲಿ ಅರಿವು/ಜಾಗೃತಿ ಮೂಡಿಸಲು ಆಯಾ ಜಿಲ್ಲೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳ ಸಲಹೆ/ಸೇವೆಯನ್ನು ಪಡೆದುಕೊಳ್ಳುವುದು.

16) ಹೆಣ್ಣು ಮಕ್ಕಳು ಶಿಕ್ಷಣವನ್ನು ಪ್ರೋತ್ಸಾಹಿಸಲು ಶಾಲೆ/ವಸತಿ ಶಾಲೆಗಳಲ್ಲಿ ಪ್ರತ್ಯೇಕ ಶೌಚಾಲಯ ವ್ಯವಸ್ಥೆ ಮತ್ತು ನಿರ್ವಹಣೆ ಸೇರಿದಂತೆ ಸ್ಯಾನಿಟರಿ ಪ್ಯಾಡ್ ಒದಗಿಸುವ ಮತ್ತು ವಿಲೇವಾರಿ ವ್ಯವಸ್ಥೆ ಸಮರ್ಪಕವಾಗಿ ನಿರ್ವಹಿಸುವುದು.

17) ಎಲ್ಲಾ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಶಾಲೆ/ವಸತಿ ಶಾಲೆಗಳಿಗೆ ಭೇಟಿ ನೀಡಿ ಕುಂದುಕೊರತೆಗಳನ್ನು ಆಗಿಂದಾಗ್ಗೆ ಸಮಸ್ಯೆಗಳನ್ನು ಪರಿಹರಿಸುವುದು.

18) ಮಕ್ಕಳ ರಕ್ಷಣೆ, ಪೋಷಣೆ ಮತ್ತು ಪುನರ್ವಸತಿ ಕಲ್ಪಿಸುವುದು ಎಲ್ಲಾ ಇಲಾಖಾ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಬದ್ಧತೆಯಿಂದ ಮಕ್ಕಳ ಹಕ್ಕುಗಳ ರಕ್ಷಣಾ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳುವುದು.

19) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಕಡ್ಡಾಯವಾಗಿ ಸಿ.ಸಿ. ಕ್ಯಾಮರಾವನ್ನು ಅಳವಡಿಸುವುದು.

20) ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಶಾಲಾ ಗುರುತಿನ ಚೀಟಿಯಲ್ಲಿ ಕಡ್ಡಾಯವಾಗಿ ಮಕ್ಕಳ ಸಹಾಯವಾಣಿ-1098/112 ಲೋಗೊವನ್ನು ಮುದ್ರಿಸುವುದು.

21) ಎಲ್ಲಾ ಶಾಲಾ ಕಾಲೇಜುಗಳಲ್ಲಿನ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಮಕ್ಕಳ ಸಮಸ್ಯೆಗಳನ್ನು ಹೇಳಿಕೊಳ್ಳಲು ಮತ್ತು ಆಲಿಸಲು ಒಬ್ಬ ಮಕ್ಕಳ ಸ್ನೇಹಿ ಶಿಕ್ಷಕಿಯನ್ನು ಗುರುತಿಸಿ ವಾರದಲ್ಲಿ ಒಂದುದಿನ ಇದಕ್ಕಾಗಿ ಸಮಯ ನಿಗದಿಗೊಳಿಸುವುದು.

22) ಮಕ್ಕಳ ಶರೀರದಲ್ಲಿ ಮತ್ತು ಆರೋಗ್ಯದಲ್ಲಿ ಉಂಟಾಗುವ ಏರುಪೇರುಗಳು ಮತ್ತು ಮಾನಸಿಕ ಬದಲಾವಣೆಗಳ ಬಗ್ಗೆ ಬಾಲಕಿಗೆ ಆಪ್ತ ಸಮಾಲೋಚನೆ ಅಗತ್ಯವಿದ್ದಲ್ಲಿ ಉಚಿತ ಸಹಾಯವಾಣಿ-14416 ಬಳಸಿಕೊಳ್ಳಲು ಅರಿವು ಮೂಡಿಸುವುದು.
23) ವಸತಿ ನಿಲಯಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳ ಚಲನ-ವಲನ ಮತ್ತು ವರ್ತನೆಗಳಲ್ಲಿ ಬದಲಾವಣೆಗಳಾದಲ್ಲಿ ಗುರುತಿಸಿ ಅಗತ್ಯ ಆಪ್ತ ಸಮಾಲೋಚನಾ ನೆರವು ಒದಗಿಸುವುದು.
24) ಗೈರು ಹಾಜರಾದ ವಿದ್ಯಾರ್ಥಿಗಳ ಪಾಲಕರನ್ನು ಸಂಪರ್ಕಿಸಿ, ಮರು ದಾಖಲಾತಿಗೆ ಕ್ರಮವಹಿಸುವುದು.
25) ವಸತಿ ನಿಲಯಗಳಲ್ಲಿ ಮಕ್ಕಳಿಗೆ ಸೈಬರ್ ಅಪರಾಧಗಳು/ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.
26) ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯಗಳಲ್ಲಿ ಯಾವುದೇ ಬಾಲಕಿ ಒಮ್ಮೆ ಹಾಸ್ಟೆಲ್ ಪ್ರವೇಶಾತಿ ಪಡೆದು, ಶೈಕ್ಷಣಿಕ ವರ್ಷದ ಮಧ್ಯದಲ್ಲಿ ವಸತಿ ನಿಲಯವನ್ನು ಬಿಟ್ಟು ಹೋಗುವ ಪ್ರಕರಣಗಳಲ್ಲಿ ಕಡ್ಡಾಯವಾಗಿ ಸಂಬಂಧಪಟ್ಟ ಪೋಷಕರನ್ನು ಕರೆದು ಸಮಾಲೋಚನೆ ನಡೆಸತಕ್ಕದ್ದು.
27) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

**E) <u>ಒಳಾಡಳಿತ ಇಲಾಖೆ</u>**

01) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.
02) ಪೊಲೀಸ್ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ನಡೆಯುವ ಬಾಲ್ಯವಿವಾಹ ಪ್ರಕರಣಗಳನ್ನು ಸ್ವಯಂ ಪ್ರೇರಿತವಾಗಿ ದೂರು ದಾಖಲು ಮಾಡಿಕೊಳ್ಳಬೇಕಾಗಿರುತ್ತದೆ. ಎಲ್ಲಾ ಬಾಲ್ಯವಿವಾಹ ನಡೆದ ಹಾಗೂ ತಡೆದ ಪ್ರಕರಣಗಳಲ್ಲಿ ನಿಯಮಾನುಸಾರ ಎಫ್.ಐ.ಆರ್ ದಾಖಲಿಸಲು ಕ್ರಮವಹಿಸುವುದು.
03) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿಸಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.
04) ಬೆಳಿಗ್ಗೆ ಮತ್ತು ರಾತ್ರಿ ಪಾಳಿಯಲ್ಲಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ಕಡ್ಡಾಯವಾಗಿ ಪೊಲೀಸ್ ಇಲಾಖೆಯಿಂದ ಗಸ್ತು ಕೈಗೊಳ್ಳುವುದು.
05) ಸ್ಥಳೀಯ ಪೊಲೀಸ್ ಅಧಿಕಾರಿ/ಸಿಬ್ಬಂದಿಯವರು ಗ್ರಾಮ ಪಂಚಾಯತ್ ಮಟ್ಟದ ಮಹಿಳೆಯರು ಮತ್ತು ಮಕ್ಕಳ ಕಾವಲು ಸಮಿತಿ ಸಭೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಬಾಲ್ಯ ವಿವಾಹ ತಡೆಗಟ್ಟುವಲ್ಲಿ ಕ್ರಮವಹಿಸುವುದು.
06) ಬಾಲ್ಯ ವಿವಾಹ ನಿಷೇಧ ಕರ್ನಾಟಕ ನಿಯಮಗಳು-2016 ರನ್ವಯ ಅಪರಾಧದ ಸಂಜ್ಞೆಯನ್ನು ಗಮನಿಸಿ ತಾನಾಗಿಯೇ (Suo-moto) ಕ್ರಮ ಕೈಗೊಳ್ಳಬಹುದಾಗಿದ್ದು, ಬಾಲ್ಯ ವಿವಾಹಗಳು ನಡೆದ ಅಥವಾ ನಡೆಯುತ್ತಿರುವ ಸಂದರ್ಭಗಳಲ್ಲಿ Suo-moto ಪ್ರಕರಣವನ್ನು ದಾಖಲಿಸುವುದು.
07) ಸೈಬರ್ ಅಪರಾಧಗಳು/ ಮಾದಕ ಪದಾರ್ಥಗಳ ಸೇವನೆಯಿಂದಾಗುವ ದುಷ್ಪರಿಣಾಮಗಳು ಹಾಗೂ ತಕ್ಷಣಕ್ಕೆ ಕೈಗೊಳ್ಳಬಹುದಾದ ಸ್ವಯಂ ರಕ್ಷಣಾ ಕ್ರಮಗಳ ಕುರಿತು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವುದು.
08) ತುರ್ತು (ERSS) ಸಹಾಯವಾಣಿ-112 ಕುರಿತು ವ್ಯಾಪಕ ಪ್ರಚಾರ ನೀಡುವುದು.
09) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

## F) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

01) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇದಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.

02) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.

03) ಹೆಣ್ಣುಮಕ್ಕಳ ಶಿಕ್ಷಣವನ್ನು ಪ್ರೋತ್ಸಾಹಿಸಲು ಶಾಲೆ/ವಸತಿ ಶಾಲೆಗಳಲ್ಲಿ ಮುಟ್ಟಿನಿಂದಾಗಿ ಶಾಲಾ ಹಾಜರಾತಿ ಕುಂಠಿತವಾಗದಂತೆ ಋತುಚಕ್ರದ ಆರೋಗ್ಯ ನಿರ್ವಹಣೆ (Menstrual Health Management) ಬಗ್ಗೆ ಅರಿವು ಮೂಡಿಸುವುದು. ಸ್ಯಾನಿಟರಿ ನ್ಯಾಪ್‌ಕಿನ್ ಒದಗಿಸುವುದು ಮತ್ತು ವಿಲೇವಾರಿ ವ್ಯವಸ್ಥೆಯನ್ನು ಸಮರ್ಪಕ ನಿರ್ವಹಿಸುವುದು. ಯಾವುದೇ ಕಾರಣದಿಂದ ಮುಟ್ಟಿನ ದಿನಾಂಕವು ತಪ್ಪಿದ್ದಲ್ಲಿ ಶಾಲಾ ಶಿಕ್ಷಕರು/ಹಾಸ್ಟಲ್ ವಾರ್ಡನ್ ರವರು ಹತ್ತಿರದ ಆರೋಗ್ಯ ಸಂಸ್ಥೆಗೆ ಸಂಪರ್ಕಿಸಬಹುದಾಗಿದೆ. ಅವಶ್ಯಕತೆ ಇದ್ದಲ್ಲಿ ಆರೋಗ್ಯ ಸಂಸ್ಥೆಯ ವೈದ್ಯರು ಸ್ತ್ರೀ-ರೋಗ ತಜ್ಞರಿಗೆ ಸಂಪರ್ಕಿಸುವುದು.

04) ಆರೋಗ್ಯ ಇಲಾಖೆಯು ಕಡ್ಡಾಯವಾಗಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ (ವಸತಿ ಮತ್ತು ವಸತಿ ರಹಿತ ಒಳಗೊಂಡಂತೆ) ನಿಗದಿತ ವೇಳಾಪಟ್ಟಿಯಂತೆ ನಿಯಮಿತವಾಗಿ ಆರೋಗ್ಯ ತಪಾಸಣೆಯನ್ನು ಕೈಗೊಳ್ಳುವುದು ಮತ್ತು ಗುರುತರವಾದ ಕಾಯಿಲೆ ಹಾಗೂ ಲಕ್ಷಣಗಳು ಕಂಡುಬಂದಲ್ಲಿ ಸಂಬಂಧಪಟ್ಟ ಅಧಿಕಾರಿಗಳಿಗೆ ಮಾಹಿತಿಯನ್ನು ನೀಡುವುದು.

05) ವೈದ್ಯರ ಸಲಹೆ ಇಲ್ಲದೆ ಷೆಡ್ಯೂಲ್-ಹೆಚ್ ಔಷಧಿಗಳಾದಂತಹ ಗರ್ಭಪಾತ ಮಾತ್ರೆಗಳನ್ನು ಮಾರಾಟ ಮಾಡುವಂತಹ ಅಂಗಡಿಗಳ ಮೇಲೆ ಔಷಧಿ ನಿಯಂತ್ರಣ ಇಲಾಖೆ ಸೂಕ್ತ ಕಾನೂನು ಕ್ರಮ ಜರುಗಿಸುವುದು.

06) ಅನಧಿಕೃತವಾಗಿ ಗರ್ಭಪಾತ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ವೈದ್ಯರು ಮತ್ತು ಸಾರ್ವಜನಿಕರುಗಳ ವಿರುದ್ಧ MTP ಕಾಯ್ದೆ ಅನ್ವಯ ಕ್ರಮ ಜರುಗಿಸುವುದು ಮತ್ತು ಈ ಕುರಿತು ವೈದ್ಯಕೀಯ ಮಂಡಳಿ ಹಾಗೂ ಇನ್ನಿತರ ನುರಿತ ತಜ್ಞರ ಸಲಹಾ ಸಮಿತಿ ರಚಿಸುವುದು.

07) ಯಾವುದೇ ಮಕ್ಕಳಿಗೆ ಪಾಲನೆ ಮತ್ತು ಪೋಷಣೆ ಅಗತ್ಯವಿದ್ದಲ್ಲಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸುವುದು.

## G) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮತ್ತು ಮಕ್ಕಳ ರಕ್ಷಣಾ ನಿರ್ದೇಶನಾಲಯ.

01) ಸರ್ಕಾರ ಈಗಾಗಲೇ ಗುರುತಿಸಿ ಅಧಿಸೂಚಿಸಿರುವ ಇಲಾಖೆಯ ಬಾಲ್ಯವಿವಾಹ ನಿಷೇಧಾಧಿಕಾರಿಗಳು, ಬಾಲ್ಯವಿವಾಹ ಪ್ರಕರಣಗಳನ್ನು ತಡೆಗಟ್ಟಲು ನಿಯಮಾನುಸಾರ ಕ್ರಮವಹಿಸುವುದು.

02) ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016 ಪರಿಷ್ಕೃತ 2023ರನ್ನು ಅನುಷ್ಠಾನಗೊಳಿಸುವುದು.

03) ಮಾದಕ ವ್ಯಸನದ ಬಗ್ಗೆ ನಿಯಮಿತ ತಪಾಸಣೆಯನ್ನು ಖಚಿತಪಡಿಸಿಕೊಳ್ಳುವುದು ಮತ್ತು ಶಾಲಾ ಪಠ್ಯಕ್ರಮದಲ್ಲಿ ಮಾದಕ ವ್ಯಸನದ ವಿರುದ್ಧ ಮಕ್ಕಳ ವಯಸ್ಸಿಗೆ ಅನುಗುಣವಾಗಿ ಸೂಕ್ತಜಾಗೃತಿ, ಶಿಕ್ಷಣ, ಸಂಪರ್ಕವನ್ನು ಪರಿಣಾಮಕಾರಿಯಾಗಿ ಸಂವಹನದ (IEC) ಮೂಲಕ ಅದರ ದುಷ್ಪರಿಣಾಮಗಳ ಬಗ್ಗೆ ಮಕ್ಕಳಲ್ಲಿ ಜಾಗೃತಿ ಮೂಡಿಸುವುದು.

04) ಬಾಲ್ಯವಿವಾಹ, ಪೋಕ್ಸೋ ಕಾಯ್ದೆಯ ಉಲ್ಲಂಘನೆಗೆ ಸಂಬಂಧಿದಂತೆ ಇರುವ ಶಿಕ್ಷೆಗಳ ಕುರಿತಂತೆ ಗಂಡು ಮತ್ತು ಹೆಣ್ಣು ಮಕ್ಕಳು ಹಾಗೂ ಯುವಕ ಮತ್ತು ಯುವತಿಯರಿಗೆ ಅರಿವು ಮೂಡಿಸುವುದು.

05) ಶಾಲೆ ಬಿಟ್ಟ ಹೆಣ್ಣು ಮಕ್ಕಳನ್ನು ಪುನ: ಶಾಲೆಗೆ ಸೇರಿಸಿ 18 ವರ್ಷದವರೆಗೂ ಶಿಕ್ಷಣ ಮುಂದುವರೆಸುವ ಕುರಿತು ಪೋಷಕರ ಮನವೊಲಿಸಿ ಸೂಕ್ತ ಕ್ರಮಕೈಗೊಳ್ಳುವುದು.

06) ಶಾಲಾ ಮಕ್ಕಳು ಬಾಲಕಾರ್ಮಿಕತೆಗೆ ಒಳಗಾಗದಂತೆ ಅನುಸರಣೆ ಮಾಡುವುದು.

07) ಮಕ್ಕಳ ರಕ್ಷಣೆ, ಪೋಷಣೆ ಮತ್ತು ಪುನರ್ವಸತಿ ಕಲ್ಪಿಸುವುದು ಎಲ್ಲಾ ಇಲಾಖಾ ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಅಧಿಕಾರಿಗಳು ಬದ್ಧತೆಯಿಂದ ಮಕ್ಕಳ ಹಕ್ಕುಗಳ ರಕ್ಷಣಾ ಅನುಷ್ಠಾನವನ್ನು ಖಾತ್ರಿಪಡಿಸಿಕೊಳ್ಳುವುದು.

08) ಆರ್.ಸಿ.ಹೆಚ್ ದತ್ತಾಂಶವನ್ನು ಜಿಲ್ಲಾ ಹಂತದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಡೆದು ಉಪ ನಿರ್ದೇಶಕರು/ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರ ಹಂತದಲ್ಲಿ ವಿಶ್ಲೇಷಿಸಿ ಬಾಲಗರ್ಭಿಣಿಯರ ರಕ್ಷಣೆ ಮತ್ತು ಪುನರ್ ವಸತಿಗೆ ಕ್ರಮವಹಿಸುವುದು.

09) ಬಾಲ್ಯ ವಿವಾಹಗಳನ್ನು ತಡೆಯವ ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಸಮನ್ವಯ ಮತ್ತು ಪರಿಶೀಲನಾ ಸಮಿತಿ ಸಭೆಗಳನ್ನು ನಿಯಮಿತವಾಗಿ ಆಯೋಜಿಸುವುದು ಹಾಗೂ ಬಾಲ್ಯ ವಿವಾಹ ತಡಗಟ್ಟುವ ಕುರಿತು ಮೇಲ್ವಿಚಾರಣೆ ಮಾಡುವುದು.

10) ಬಾಲ್ಯ ವಿವಾಹ ನಿಷೇಧ ಕಾಯ್ದೆಯ ಸಮಪರ್ಕ ಅನುಷ್ಠಾನಕ್ಕೆ ಸಂಬಂಧಿಸಿದಂತೆ, ವಿವಿಧ ಬಾಗೀದಾರ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸುವುದು.

11) ಆರ್.ಸಿ.ಹೆಚ್ ಪೋರ್ಟಲ್ ನಲ್ಲಿ ದಾಖಲಾಗುವ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಬಾಲಗರ್ಭಿಣಿಯರ ಮಾಹಿತಿಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಪಡೆದು ವಿಶ್ಲೇಷಿಸಿ ಬಾಲಗರ್ಭಿಣಿಯರಿಗೆ ಅಗತ್ಯ ರಕ್ಷಣೆ ಹಾಗೂ ಪುನರ್ ವಸತಿ ಒದಗಿಸುವುದು.

ಬಾಲ್ಯವಿವಾಹ, ಬಾಲಗರ್ಭಿಣಿ, ಪೊಕ್ಸೋ ಪ್ರಕರಣಗಳನ್ನು ತಡೆಗಟ್ಟಲು ವಿವಿಧ ಇಲಾಖೆಗಳ ಬಾಲ್ಯವಿವಾಹ ನಿಷೇಧಾಧಿಕಾರಿಗಳು ನಿಯಮಾನುಸಾರ ವಿಫಲರಾದಲ್ಲಿ/ನಿರ್ಲಕ್ಷ್ಯ ತೋರಿದಲ್ಲಿ ಭಾರತೀಯ ನ್ಯಾಯ ಸಂಹಿತೆ(BNS) 2023ರ ಸೆಕ್ಷನ್ 199(c)ರಂತೆ ಅವರ ವಿರುದ್ಧ ಕ್ರಮ ಜರುಗಿಸಲು ಮತ್ತು ಶಿಸ್ತು ಕ್ರಮಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಸರ್ಕಾರದ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಸರ್ಕಾರದ ಕಾರ್ಯದರ್ಶಿ
ಅಲ್ಪ ಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ

ಸರ್ಕಾರದ ಪ್ರಧಾನ ಕಾರ್ಯದರ್ಶಿ
ಒಳಾಡಳಿತ ಇಲಾಖೆ

ಸರ್ಕಾರದ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

**ಇವರಿಗೆ:**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
3. ನಿರ್ದೇಶಕರು, ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
4. ಆಯುಕ್ತರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
7. ನಿರ್ದೇಶಕರು, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು ಇವರ ಮೂಲಕ ಸಂಬಂಧಪಟ್ಟ ಅಧಿಕಾರಿಗಳಿಗೆ ಜಾರಿಗೊಳಿಸುವುದು.
8. ಕಛೇರಿ ಪ್ರತಿ.